ಆ) ಈ ಖಾಲಿ ಹುದ್ದೆಗಳನ್ನು ಸಾಮಾನ್ಯ ನೇಮಕಾತಿ ನಿಯಮಗಳನ್ವಯ ನೇಮಕಾತಿ ಮಾಡಲು ನಿರ್ಧರಿಸಿದ್ದು ಅದರಂತೆ ಹುದ್ದೆಗಳನ್ನು ತುಂಬಲು ಅನುಮತಿ ನೀಡಲಾಗಿದೆ. ನೇಮಕಾತಿ ಪ್ರಕ್ರಿಯೆಗಳು ಪ್ರಾರಂಭವಾಗಿವೆ. ಸೆಪ್ಟೆಂಬರ್ ತಿಂಗಳ ಅಂತ್ಯದೊಳಗೆ ನೇಮಕಾತಿ ಕಾರ್ಯವನ್ನು ಮುಗಿಸಲಾಗುವುದು.

ವಿಷಯ:- ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯ ಕೆಲಸಗಾರರಿಗೆ ವಸತಿ ನಿವೇಶನ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 130 (469)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ):- ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಹುಬ್ಬಳ್ಳಿ ಕಿಮ್ಸ್ ಆಸ್ಪತ್ರೆಯಲ್ಲಿ 700 ಕೆಲಸಗಾರರು ಸೇವೆ ಸಲ್ಲಿಸುತ್ತಿರುವುದು ನಿಜವೇ?

ಆ) ಹುಬ್ಬಳ್ಳಿಯ ಉಣಕಲ್ ಗ್ರಾಮದ ಸರ್ವೆ ನಂಬರ್ 46, 47 ಮತ್ತು 68ರಲ್ಲಿನ ಜಮೀನಿನಲ್ಲಿ ಇವರಿಗೆ ವಸತಿ ನಿವೇಶನ ಒದಗಿಸಲು ಕ್ರಮ ಕೈಗೊಳ್ಳಲಾಗುವುದೇ?

ಇ) ಹಾಗಿದ್ದಲ್ಲಿ ಈ ನಿವೇಶನಗಳನ್ನು ಇವರ ವಶಕ್ಕೆ ಯಾವಾಗ ಕೊಡಲಾಗುವುದು?

ಡಾ॥ ಎಂ.ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು):-

ಅ) ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಆಸ್ಪತ್ರೆ, ಹುಬ್ಬಳ್ಳಿಯಲ್ಲಿ ಒಟ್ಟು ಮಂಜೂರಾದ ಕೆಲಸಗಾರರ ಸಂಖ್ಯೆ : 589 ಮತ್ತು ಹಾಲಿ ಕಾರ್ಯ ನಿರ್ವಹಿಸುತ್ತಿರುವವರು ಒಟ್ಟು 473 ಮಾತ್ರ.

ಆ) ಇಲ್ಲಾ.

ಇ) ಉದ್ಭವಿಸುವುದಿಲ್ಲ.

ವಿಷಯ: ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯ ಸ್ವಾಯತ್ತ ಸಂಸ್ಥೆಯಾಗಿ ಪರಿವರ್ತನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 131 (468)

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ):- ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ಮಹಾವಿದ್ಯಾಲಯವನ್ನು ಸ್ವಾಯತ್ತ ಸಂಸ್ಥೆಯನ್ನಾಗಿ ಪರಿವರ್ತಿಸಿ ನಿರ್ದೇಶಕರನ್ನು ನೇಮಕ ಮಾಡಿರುವುದು ಸರ್ಕಾರಕ್ಕೆ ಗಮನಕ್ಕೆ ಬಂದಿದೆಯೇ?

ಆ) ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಆಡಳಿತ ನಿಯಮಗಳು

ಕಾರ್ಯರೂಪದಲ್ಲಿಲ್ಲದಿರುವುದು ನಿಜವೇ?

ಇ) ಹಾಗಿಲ್ಲದಿದ್ದಲ್ಲಿ ಈ ಕಾರ್ಯನೀತಿಗಳನ್ನು ಅಧಿಕೃತಗೊಳಿಸಿ ನಿರ್ದೇಶಕರು ವಿಶ್ವವಿದ್ಯಾಲಯದ ಆಡಳಿತ ನಡೆಸಲು ಸರ್ಕಾರವು ಆದೇಶಿಸಿರುವುದೇ?

ಡಾ॥ಎಂ.ಶಂಕರನಾಯಕ್ (ವೈದ್ಯಕೀಯ ಶಿಕ್ಷಣ ಸಚಿವರು):-

ಅ) ಬಂದಿದೆ.

ಆ) ಹೌದು.

ಇ) ಸಂಸ್ಥೆಯ ನೀತಿ ನಿಯಮಾವಳಿಗಳು, ಬೈಲಾಗಳನ್ನು ಒಳಗೊಂಡಂತೆ ಸ್ವಾಯತ್ತ ಸಂಸ್ಥೆಗಳ ಆಡಳಿತ ಮಂಡಳಿಯಲ್ಲಿ ಅನುಮೋದಿಸಲ್ಪಟ್ಟಿದ್ದು ನಿರ್ದೇಶಕರಿಗೆ ಸಂಪೂರ್ಣ ಅಧಿಕಾರವನ್ನು ಸ್ವತಂತ್ರವಾಗಿ ನಿರ್ವಹಿಸುವಂತೆ ಅನುಮತಿ ನೀಡಲು ಸರ್ಕಾರಿ ಆದೇಶವನ್ನು ಹೊರಡಿಸುವ ಹಂತದಲ್ಲಿದೆ.

ವಿಷಯ:- ಮಂಗಳೂರು ವಿಶ್ವವಿದ್ಯಾಲಯದ ಅಭಿವೃದ್ಧಿ ಯೋಜನೆಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 132 (13)

ಶ್ರೀ ಕೆ.ಜಯರಾಮಶೆಟ್ಟಿ (ಉಳ್ಳಾಲ):- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ರಾಜ್ಯದಲ್ಲಿ ವಿಶ್ವವಿದ್ಯಾಲಯಗಳ ಅನುದಾನಗಳಲ್ಲಿ ತಾರತಮ್ಯ ನಡೆಯುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ.

2) ರಾಜ್ಯ ಸರ್ಕಾರ ಕಳೆದ 2 ವರ್ಷಗಳಲ್ಲಿ ಬೇರೆ ಬೇರೆ ವಿಶ್ವವಿದ್ಯಾಲಯಗಳಿಗೆ ಯಾವ ಯಾವ ವಿಷಯಗಳಿಗೆ ಎಷ್ಟೆಷ್ಟು ಅನುದಾನ ಬಿಡುಗಡೆ ಮಾಡಿದೆ (ಪೂರ್ಣ ಮಾಹಿತಿ ನೀಡುವುದು)

3) ಮಂಗಳೂರು ವಿಶ್ವವಿದ್ಯಾಲಯ ಅಭಿವೃದ್ಧಿಪಡಿಸಲು ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ.

ಶ್ರೀ ಬಿ.ಸೋಮಶೇಖರ್ (ಉನ್ನತ ಶಿಕ್ಷಣ ಸಚಿವರು):-

1) ಇಲ್ಲ

2) ಸರ್ಕಾರವು ವಿಶ್ವವಿದ್ಯಾಲಯಗಳಿಗೆ ಯೋಜನೇತರ ಅಡಿಯಲ್ಲಿ ಬ್ಲಾಕ್ ಅನುದಾನವನ್ನು ಸಿಬ್ಬಂದಿಗಳ ವೇತನ ವಿತರಣೆ ಮುಂತಾದವುಗಳ ವೆಚ್ಚಕ್ಕೆ ಮತ್ತು ಯೋಜನೆಯಡಿಯಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳಿಗಾಗಿ ಒಟ್ಟಾರೆ ಅನುದಾನವನ್ನು ಬಿಡುಗಡೆ ಮಾಡಲಾಗುತ್ತಿದೆ. (ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಿದೆ)

3) 1996-97 ನೇ ಸಾಲಿನಲ್ಲಿ ಯೋಜನೆಯಡಿಯಲ್ಲಿ 80 ಲಕ್ಷ ರೂ.ಗಳನ್ನು ಈ